**ದಿನಾಂಕ: 18.06.2022 ರಂದು ಮದ್ಯಾಹ್ನ 3:00 ಗಂಟೆಗೆ ವಾರ್ಡ್ ಸಂಖ್ಯೆ 180 ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾಡ್ 180 ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಶಿವರುದ್ರಯ್ಯ – ಹಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
4. ಶ್ರೀ. ಚಂದನ್. ಜೆ – ಕಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
5. ಶ್ರೀ. Syed Muiez – ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 180 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆಯದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಗಿದೆ. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ಮಾನ್ಯ ರಾಷ್ಟ್ರಪತಿಯ ಆಗಮನ ಸಂಬಂಧ ವಾರ್ಡ್ ವ್ಯಾಪ್ತಿಯ ಕನಕಪುರ ಮುಖ್ಯರಸ್ತೆ ಬನಶಂಕರಿ ದೇವಸ್ಥಾನ ದಿಂದ ಸಾರಕ್ಕಿ ಸಿಗ್ನಲ್ ವರೆಗೂ ತ್ಯಾಜ್ಯ ಹಾಗೂ ಡೆಬ್ರಿಸ್‌ಗಳನ್ನು ತೆರವುಗೊಳಿಸಿ ಸಾಮೂಹಿಕವಾಗಿ ಸ್ವಚ್ಚಗೊಳಿಸಲಾಗಿರುತ್ತದೆ.

ಸುಬ್ರಮಣ್ಯಪುರ ಮುಖ್ಯರಸ್ತೆ ಮತ್ತು ಕದಿರೇನಹಳ್ಳಿ ಆಟದ ಮೈದಾನಗಳ ಬಳಿ ಕಸದ ರಾಶಿ ಇದ್ದು ಸಾರ್ವಜನಿಕರಿಗೆ ತೊಂದರೆಯುಂಟಾಗಿರುತ್ತದೆ ಎಂದು ದೂರು ಬಂದ ಹಿನ್ನಲೆಯಲ್ಲಿ ಸದರಿ ಸ್ಥಳಗಳಲ್ಲಿ ಇದ್ದ ತ್ಯಾಜ್ಯಗಳನ್ನು ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನೂಕೂಲ ಮಾಡಿಕೊಡಲಾಗಿರುತ್ತದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿರುತ್ತಾರೆ.

2. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ರಿಂಗ್ ರಸ್ತೆಯ ಕದಿರೇನಹಳ್ಳಿ ಆಟದ ಮೈದನ ಮುಂದೆ ಇರುವ ಮ್ಯಾನ್‌ಹೋಲ್ ತುಂಬಿ ರಸ್ತೆಯಲ್ಲಿ ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ನೀಡಿದ ದೂರಿನ ಮೇರೆಗೆ ಬಿಡಬ್ಲ್ಯೂಎಸ್ಎಸ್‌ಬಿ ರವರ ವತಿಯಿಂದ ಸದರಿ ಮ್ಯಾನ್‌ಹೋಲ್‌ಅನ್ನು ಸರಿಪಡಿಸಿ ಸ್ವಚ್ಚಗೊಳಿಸಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ಬಿಡಬ್ಲ್ಯೂಎಸ್ಎಸ್‌ಬಿ ರವರು ತಿಳಿಸಿದರು.

ವಾರ್ಡ್ ವ್ಯಾಪ್ತಿಯ ಕನಕಪುರ ಮುಖ್ಯರಸ್ತೆಗೆ ಮಾನ್ಯ ರಾಷ್ಟ್ರಪತಿ ರವರು ಆಗಮಿಸುವ ಕಾರಣ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಇಟ್ಟಿದ್ದ ಅಂಗಡಿಗಳನ್ನು ತೆರವುಗೊಳಿಸಲಾಗಿರುತ್ತದೆ. ಹಾಗು ಸದರಿ ರಸ್ತೆಯಲ್ಲಿ ಇದ್ದ ಡೆಬ್ರಿಸ್‌ಗಳನ್ನು, ಪಾದಚಾರಿ ಮಾರ್ಗದ ಬದಿಯಲ್ಲಿ ಇದ್ದ ಕಲ್ಲುಗಳನ್ನು ತೆರವುಗೊಳಿಸಿ ಸದರಿ ರಸ್ತೆಯನ್ನು ಹಾಗೂ ಪಾದಚಾರಿ ಮಾರ್ಗಗಳನ್ನು ಸ್ವಚ್ಚಗೊಳಿಸಲಾಗಿರುತ್ತದೆ.

ವಾರ್ಡ್ ವ್ಯಾಪ್ತಿಯ ಹೊರ ವರ್ತುಲ ರಸ್ತೆಯಲ್ಲಿ ಅಧಿಕ ಮಳೆಯಿಂದಾಗಿ ರಸ್ತೆ ಬದಿಯಲ್ಲೆ ನೀರು ನಿಂತು ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ಹೊರ ವರ್ತುಲ ರಸ್ತೆಯಲ್ಲಿ ಕದರೇನಹಳ್ಳಿ ಕೆಳಸೇತುವೆಯಿಂದ ಸಾರಕ್ಕಿ ಸಿಗ್ನಲ್ ವರೆಗೆ ಇರುವ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆರವುಗೊಳಿಸಿ ನೀರು ಸರಾಗವಾಗಿ ಹರಿಯುವಂತೆ ಮಾಡಲಾಗಿರುತ್ತದೆ.

ಫಿಕ್ಸ್ ಮೈ ಸ್ಟ್ರೀಟ್ (FIX MY STREET) ಆ್ಯಪ್‌ನಲ್ಲಿ ರಸ್ತೆಗುಂಡಿಗಳ ಬಗ್ಗೆ ದೂರು ಬಂದಿರುತ್ತದೆ. ಅದರಂತೆ ಯಾರಬ್‌ನಗರ 34ನೇ ಅಡ್ಡರಸ್ತೆಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 180 ರವರು ತಿಳಿಸಿರುತ್ತಾರೆ.

ಅಧ್ಯಕ್ಷರು ರವರು ಸಭೆಯನ್ನು ಉದ್ದೇಶಿಸಿ ಮಾತನಾಡಿ ಪ್ರಸ್ತುತ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ವಾರ್ಡ್ ಮಟ್ಟದ ಶೋಲ್ಡರ್ ಡ್ರೈನ್ ಮತ್ತು ಡೆಬ್ರಿಸ್‌ಗಳನ್ನು ಆಗಿಂದಾಗ್ಗೆ ಸ್ವಚ್ಚಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಚಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 180
ಬನಶಂಕರಿ ದೇವಸ್ಥಾನ